ಈ) 2010–11 ನೇ ಸಾಲಿನ ಕೇಂದ್ರ ರೈಲ್ವೆ ಆಯವ್ಯಯದಲ್ಲಿ ಸದರಿ ಮಾರ್ಗಕ್ಕೆ ರೂ. 30.00 ಕೋಟಿಯನ್ನು ಒದಗಣೆ ಮಾಡಿದೆ. ರಾಜ್ಯ ಸರ್ಕಾರವು ಸಹ ಹೊಸ ವೆಚ್ಚ ಹಂಚಿಕೆ ಯೋಜನೆಗಳಿಗಾಗಿ 100 ಕೋಟಿಯನ್ನು ಒದಗಣೆ ಮಾಡಿದೆ.

ಉ) ಸದರಿ ಮಾರ್ಗದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ.

ಊ) ಮುನಿರಾಬಾದ್–ಮೆಹಬೂಬ್ ನಗರ ರೈಲ್ವೆ ಮಾರ್ಗದ ಕಾಮಗಾರಿಗೆ ರಾಜ್ಯ ಸರ್ಕಾರವು ಇದುವರೆಗೆ ರೂ. 15.00 ಕೋಟಿಯನ್ನು ಬಿಡುಗಡೆ ಮಾಡಿದೆ ಹಾಗೂ ರೈಲ್ವೆ ಇಲಾಖೆಯು ರೂ. 9.10 ಕೋಟಿಯನ್ನು ಬಿಡುಗಡೆ ಮಾಡಿದ್ದು, ಒಟ್ಟಾರೆ ಈ ಮಾರ್ಗಕ್ಕೆ ಇದುವರೆಗೆ ರೂ. 18.20 ಕೋಟಿಯನ್ನು ವೆಚ್ಚ ಮಾಡಲಾಗಿದೆ.

ಪ್ರವಾಸೋದ್ಯಮ ಕಾರ್ಯಕ್ರಮ

338 (919) ಶ್ರೀ ಖಾದರ್ ಯು.ಟಿ. (ಮಂಗಳೂರು):–ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಪ್ರವಾಸಿಗರನ್ನು ಆಕರ್ಷಿಸಲು ಇಲಾಖೆ ಯಾವುದಾದರೂ ಹೊಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಜಿ. ಜನಾರ್ದನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು):–

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಇಲಾಖೆಯು ಈ ಕೆಳಗಿನ ನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.

1. ಈಗಾಗಲೇ ಪ್ರಸಿದ್ಧಿಯಾಗಿರುವ ಪಿಲಿಕುಳ ನಿಸರ್ಗಧಾಮಕ್ಕೆ ಇನ್ನೂ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಹೆಚ್ಚುವರಿ ಸೌಲಭ್ಯಗಳಾದ ಕಂಬಳ ಕ್ರೀಡಾ ಪ್ರದೇಶ ಅಭಿವೃದ್ಧಿ, ಪರಂಪರಾ ಗ್ರಾಮ ಜೋಡಣೆ, ಆಯುರ್ವೇದ ಚಿಕಿತ್ಸಾ ಸೌಲಭ್ಯ, ಸಂಸ್ಕೃತಿ ಗ್ರಾಮ ಹಾಗೂ ವನ್ಯ ಪ್ರಾಣಿ ವಿಭಾಗ, ಗಾಲ್ಫ್‌ಕೋರ್ಸ್ ಅಭಿವೃದ್ಧಿ ಮುಂತಾದ ಸೌಲಭ್ಯಗಳನ್ನು ಅಳವಡಿಸಿ ಅಭಿವೃದ್ಧಿಪಡಿಸಲಾಗುತ್ತಿದೆ.

2. ಸುಲ್ತಾನ್ ಬತ್ತೇರಿಯಿಂದ ತಣ್ಣೀರು ಬಾವಿವರೆಗೆ ತೂಗು ಸೇತುವೆ ನಿರ್ಮಾಣ ಮಾಡುವ ಯೋಜನೆ ಹಮ್ಮಿಕೊಳ್ಳಲಾಗಿದೆ.

3. ಕಟೀಲು ದುರ್ಗಾಪರಮೇಶ್ವರಿ ದೇವಸ್ಥಾನದ ಬಳಿ ಯಾತ್ರಿ ನಿವಾಸ ನಿರ್ಮಿಸಲಾಗುತ್ತಿದೆ.

4. ಉಲ್ಲಾಳ [ಸೋಮೇಶ್ವರ], ಪಣಂಬೂರು ಕಡಲ ತೀರಗಳ ಬಳಿ ಪ್ರವಾಸಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

5. ಮಂಗಳೂರಿನ ತಣ್ಣೀರು ಬಾವಿ ಬಳಿ 18 ಹೋಲ್‌ಗಳ ಗಾಲ್ಫ್ ಕೋರ್ಸ್ ಯೋಜನೆಯನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

ಆ) ಮೇಲ್ಕಂಡ ಯೋಜನೆಗಳಲ್ಲಿ ಮೊದಲ ನಾಲ್ಕು ಯೋಜನೆಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ. 18 ಹೋಲ್‌ಗಳ ಗಾಲ್ಫ್ ಕೋರ್ಸ್ ಅಭಿವೃದ್ಧಿಪಡಿಸಲು ಖಾಸಗಿ ಡೆವಲಪರ್‌ನ್ನು ಆಯ್ಕೆ ಮಾಡಲು ಟೆಂಡರ್ ಕರೆಯಲಾಗಿದೆ.

ಆಶ್ರಯ ಯೋಜನೆ

339 (920) ಶ್ರೀ ಖಾದರ್ ಯು.ಟಿ. (ಮಂಗಳೂರು):–ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಆಶ್ರಯ ಯೋಜನೆಗೆ ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗುವುದೇ;

ಆ) ಹಾಗಿದ್ದಲ್ಲಿ, ಈ ಸಮಿತಿಗಳನ್ನು ಯಾವಾಗ ರಚಿಸಲಾಗುವುದು?

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು):–

ಅ) ರಾಜ್ಯದಲ್ಲಿನ ಇಲ್ಲ ನಗರ/ಪಟ್ಟಣ ಆಶ್ರಯ ಸಮಿತಿಗಳನ್ನು ಈಗಾಗಲೇ ರಚಿಸಲಾಗಿದ್ದು ಕೆಲವು ಸಮಿತಿಗಳಿಗೆ ಮಾತ್ರ ಅಧಿಕಾರೇತರ ಸದಸ್ಯರ ನಾಮನಿರ್ದೇಶನವಾಗಬೇಕಿದೆ.

ಆ) ಉದ್ಭವಿಸುವುದಿಲ್ಲ.

ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವುದು

341 (922) ಶ್ರೀ ಖಾದರ್ ಯು.ಟಿ. (ಮಂಗಳೂರು):– ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರ ಈ ವರ್ಷ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಇದೆಯೇ ?